# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ :** (1) ಸರ್ಕಾರದ ಆದೇಶ ಸಂಖ್ಯೆ: ನಅಇ 173 ಬಿಎಂಆರ್ 2006, ದಿನಾಂಕ: 28.04.2007
(2) ಸರ್ಕಾರದ ಆದೇಶ ಸಂಖ್ಯೆ: ನಅಇ 173 ಬಿಎಂಆರ್ 2006, ದಿನಾಂಕ:28-05-2009.
(3) ಪತ್ರ ಸಂಖ್ಯೆ:ಬಿಎಂಆರ್‌ಡಿಎ/ಎನ್‌ಪಿಎ/ಎಂಪಿ/01/2013-14, ದಿನಾಂಕ:08.04.2013 ಮತ್ತು 31.07.2013

**ಪ್ರಸ್ತಾವನೆ :-**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರವು ದಿನಾಂಕ: 28.04.2007 ರಂದು ಸದರಿ ಪ್ರದೇಶಗಳ ವ್ಯವಸ್ಥಿತ ಬೆಳವಣಿಗೆಗೆ ಮತ್ತು ಯೋಜನಾ ದೃಷ್ಟಿಯಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(ಎ) ರನ್ವಯ ಕೆಲವು ನಿಬಂಧನೆಗೊಳಪಟ್ಟ ಕರಡು ಮಧ್ಯಂತರ ಮಹಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ನಂತರ ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ದಿನಾಂಕ:28.05.2009 ರಂದು ಮಧ್ಯಂತರ ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಲಾಗಿತ್ತು.

ಆ ಮೇರೆಗೆ ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಬೆಂಗಳೂರು ಇವರು ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಾತ್ಕಾಲಿಕ ಮಹಾಯೋಜನೆ ತಯಾರಿಸಿ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಸದರಿ ಮಹಾಯೋಜನೆಯನ್ನು 2031ನೇ ಇಸವಿಗೆ ತಯಾರಿಸಿದ್ದು, ಆ ಹೊತ್ತಿಗೆ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು ಜನಸಂಖ್ಯೆ 6.75 ಲಕ್ಷ ಎಂದು ಅಂದಾಜಿಸಲಾಗಿದೆ. ನಗರೀಕರಣದ ಎಲ್ಲೆ ಒಟ್ಟಾರೆ 7034.14 ಹೆಕ್ಟೇರ್ ಪ್ರದೇಶ ಬೇಕಾಗಬಹುದೆಂದು ಅಂದಾಜಿಸಲಾಗಿದ್ದು, ಇದರಲ್ಲಿ 3199.61 ಹೆಕ್ಟೇರ್ (ಶೇ. 45.49 ರಷ್ಟು) ಪ್ರದೇಶವನ್ನು ವಸತಿಗೂ, 317.09 ಹೆಕ್ಟೇರ್ (ಶೇ. 4.51 ರಷ್ಟು) ಪ್ರದೇಶವನ್ನು ವಾಣಿಜ್ಯಕ್ಕೂ, 1027.25 ಹೆಕ್ಟೇರ್ (ಶೇ. 14.60 ರಷ್ಟು) ಪ್ರದೇಶವನ್ನು ಕೈಗಾರಿಕೆಗೂ, 295.78 ಹೆಕ್ಟೇರ್ (ಶೇ. 4.2 ರಷ್ಟು) ಪ್ರದೇಶವನ್ನು ಸಾರ್ವಜನಿಕ ಮತ್ತು ಅರೆ ಸಾರ್ವಜನಿಕ ಉಪಯೋಗಕ್ಕೂ, 598.85 ಹೆಕ್ಟೇರ್ (ಶೇ. 8.51 ರಷ್ಟು) ಪ್ರದೇಶವನ್ನು ಉದ್ಯಾನವನ ಮತ್ತು ಬಯಲು ಜಾಗಕ್ಕೆ, ಸಾರ್ವಜನಿಕ ಉಪಯೋಗಕ್ಕೆ 124.47 ಹೆಕ್ಟೇರ್ (ಶೇ. 1.77) ಹಾಗೂ ಸಾರಿಗೆ ಮತ್ತು ಸಂಪರ್ಕ ಉಪಯೋಗಕ್ಕೆ 1471.09 ಹೆಕ್ಟೇರ್ ಪ್ರದೇಶವನ್ನು (ಶೇ. 20.91 ರಷ್ಟು) ಕಾಯ್ದಿರಿಸಲಾಗಿದೆ. ಉಲ್ಲೇಖಿತ ಮಹಾಯೋಜನೆಯನ್ನು ಅನುಷ್ಠಾನಗೊಳಿಸಲು ಬೇಕಾಗುವ ವಲಯ ನಿಯಮಾವಳಿಯನ್ನು ಸಿದ್ಧಪಡಿಸಿದ್ದು, ಸಂಬಂಧಪಟ್ಟ ನಕ್ಷೆ ಮತ್ತು ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

319

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ನಅಇ 150 ಬಿಎಂಆರ್ 2013 ಬೆಂಗಳೂರು, ದಿನಾಂಕ:16-09-2013**

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿದ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಸರ್ಕಾರವು ಈ ಕೆಳಗಿನ ನಿಬಂಧನೆಗಳಿಗೆ ಒಳಪಟ್ಟು ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(1)ರ ಮೇರೆಗೆ 60 ದಿನಗಳ ಕಾಲಾವಕಾಶ ನೀಡಿ, ಸಾರ್ವಜನಿಕರಿಂದ ಸ್ವೀಕರಿಸಬಹುದಾದ ಸಲಹೆ/ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಹ ಸಲಹೆ/ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಅಭಿಪ್ರಾಯ ನಮೂದಿಸಿ ಸರ್ಕಾರದ ಅಂತಿಮ ಅನುಮೋದನೆ ಪಡೆಯತಕ್ಕದ್ದು.

2) ಸರ್ಕಾರವು ಅನುಮೋದಿಸಿದ ಭೂ ಉಪಯೋಗ ಬದಲಾವಣೆ ಮತ್ತು ಪ್ರಾಧಿಕಾರವು ಅನುಮೋದಿಸಿದ ವಿನ್ಯಾಸ ನಕ್ಷೆಗಳನ್ನು ಅಳವಡಿಸಿಕೊಂಡು ಅಂತಿಮ ಅನುಮೋದನೆಗೆ ಸಲ್ಲಿಸತಕ್ಕದ್ದು.

3) ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಲು ಉದ್ದೇಶಿಸಿರುವ Satalite Town Ring Road (STRR), Inner Town Ring Road (ITRR), Inner Ring Road (IRR) ರಸ್ತೆಗಳ ಅಂತಿಮ ಪಂಕ್ತೀಕರಣವನ್ನು ಅಭಿವೃದ್ಧಿಗೆ ಅನುಮೋದಿಸುವ ಮೊದಲು ಪರಿಶೀಲಿಸತಕ್ಕದ್ದು.

4) ಸ್ಥಳೀಯ ಯೋಜನಾ ಪ್ರಾಧಿಕಾರವು ಉದ್ದೇಶಿತ ಭೂ ಉಪಯೋಗಗಳನ್ನು ಬೇರ್ಪಡಿಸಲು Land Use Zoning ಅಳವಡಿಸತಕ್ಕದ್ದು.

5) ತಿಪ್ಪಗೊಂಡನಹಳ್ಳಿ ಜಲಾನಯನ ಪ್ರದೇಶದ (TGR Zone-3) ವ್ಯಾಪ್ತಿಯಲ್ಲಿ ಬರುವ ವಲಯ-3ರಲ್ಲಿ ಸರ್ಕಾರದಿಂದ ಆಯಾ ಕಾಲದಲ್ಲಿ ಹೊರಡಿಸಿರುವ ಅಧಿಸೂಚನೆ/ಆದೇಶವನ್ನು ಪಾಲನೆ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು (ಇದನ್ನು ದಿನಾಂಕ:17-09-2013 ರಂದು ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಒದಗಿಸುವಂತೆ ಕೋರುತ್ತಾ).

318

ಪ್ರತಿ ಇವರಿಗೆ,

1. ಮಹಾನಗರ ಆಯುಕ್ತರು, ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸ ಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸ ಸೌಧ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ವಿಕಾಸ ಸೌಧ.
7. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆ (KUIDFC), ಬೆಂಗಳೂರು.
10. ಆಯುಕ್ತರು, ನಗರ ಭೂ ಸಾರಿಗೆ ನಿರ್ದೇಶನಾಲಯ, ಶಾಂತಿನಗರ, ಬೆಂಗಳೂರು.
11. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಜಿಲ್ಲಾಧಿಕಾರಿ, ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆ, ಬೆಂಗಳೂರು.
13. ಜಿಲ್ಲಾಧಿಕಾರಿ, ರಾಮನಗರ.
14. ಮುಖ್ಯ ಅಭಿಯಂತರರು, ರಾಷ್ಟ್ರೀಯ ಹೆದ್ದಾರಿ ನಿಗಮ ನಿಯಮಿತ, ಬೆಂಗಳೂರು.
15. ಮುಖ್ಯ ಅಭಿಯಂತರರು, ಬೆಂಗಳೂರು ಮೆಟ್ರೋ ನಿಗಮ, ಬೆಂಗಳೂರು.
16. ಸದಸ್ಯ ಕಾರ್ಯದರ್ಶಿಗಳು, ನೆಲಮಂಗಲ ಸ್ಥಳೀಯ ಯೋಜನಾ ಪ್ರಾಧಿಕಾರ, ನೆಲಮಂಗಲ.
17. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ.
18. ಶಾಖಾ ರಕ್ಷಾ ಕಡತ
19. ಹೆಚ್ಚುವರಿ ಪ್ರತಿ.